ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಎ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacbengaluru@gmail.com

ಸಂಖ್ಯೆ: ಕೆ4/5 ಮತ್ತು 8ನೇ ವಾ.ಪ/58/2022–23 ದಿನಾಂಕ: 21.01.2023

# ಜ್ಞಾಪನ

**ವಿಷಯ:** 2022–23ನೇ ಸಾಲಿನಲ್ಲಿ ರಾಜ್ಯ ಪಠ್ಯಕ್ರಮದ ಎಲ್ಲಾ ಶಾಲೆಗಳಲ್ಲಿನ 5 ಮತ್ತು 8ನೇ ತರಗತಿ ವಿದ್ಯಾರ್ಥಿಗಳಿಗೆ ನಡೆಸಲಾಗುತ್ತಿರುವ ವಾರ್ಷಿಕ ಪರೀಕ್ಷೆ/ಮೌಲ್ಯಾಂಕನಕ್ಕೆ ಸಂಬಂಧಿಸಿದಂತೆ ಪರೀಕ್ಷಾ ಕೇಂದ್ರಗಳನ್ನು ರಚಿಸುವ ಬಗ್ಗೆ.

**ಉಲ್ಲೇಖ:** 2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಕಛೇರಿ ಸುತ್ತೋಲೆ ಸಂಖ್ಯೆ: E-870867-DPII-PIOC7-2(PLM)/3/2022, ದಿನಾಂಕ: 12.12.2022

~*~*~*~

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ 2022–23 ನೇ ಸಾಲಿನಲ್ಲಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ 5 ಮತ್ತು 8ನೇ ತರಗತಿ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆ / ಮೌಲ್ಯಾಂಕನವನ್ನು ನಡೆಸಲಾಗುತ್ತಿದೆ.

ಉಲ್ಲೇಖಿತ ಸುತ್ತೋಲೆಯನ್ವಯ ಶಾಲಾವಾರು ವಿದ್ಯಾರ್ಥಿಗಳ ಸಂಖ್ಯೆಯನ್ನಾಧರಿಸಿ 5ನೇ ತರಗತಿ ಪರೀಕ್ಷಾ ಕೇಂದ್ರದಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು ಒಂದು ಕೇಂದ್ರದಲ್ಲಿ ಲಭ್ಯವಾಗುವಂತೆ, ಶಾಲಾವಾರು ವಿದ್ಯಾರ್ಥಿಗಳು ಕಡಿಮೆ ಇದ್ದಲ್ಲಿ 2 ಕಿ.ಮೀ ವ್ಯಾಪ್ತಿಯ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಸಮೀಪದ ಕಿರಿಯ / ಹಿರಿಯ ಪ್ರಾಥಮಿಕ ಶಾಲೆಗಳ ವಿದ್ಯಾರ್ಥಿಗಳೂ ಸೇರಿದಂತೆ ಪರೀಕ್ಷಾ ಕೇಂದ್ರಗಳನ್ನು ರಚಿಸುವುದು. 8ನೇ ತರಗತಿ ಪರೀಕ್ಷಾ ಕೇಂದ್ರವನ್ನು ಕನಿಷ್ಠ 50 ವಿದ್ಯಾರ್ಥಿಗಳು ಇರುವಂತೆ ಆಯಾ ಹಿರಿಯ ಪ್ರಾಥಮಿಕ/ಪ್ರೌಢಶಾಲೆಗಳಲ್ಲಿ ಸ್ಥಾಪಿಸುವುದು. ಹಿರಿಯ ಪ್ರಾಥಮಿಕ/ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಇದ್ದಲ್ಲಿ ಕನಿಷ್ಠ 2 ಕಿ.ಮೀ ವ್ಯಾಪ್ತಿಯ ಸಮೀಪದ ಶಾಲೆಗಳಿಗೆ ಟ್ಯಾಗ್ ಮಾಡುವುದು.

5 ಮತ್ತು 8ನೇ ತರಗತಿಯ ವಾರ್ಷಿಕ ಪರೀಕ್ಷೆಗೆ ಪರೀಕ್ಷಾ ಕೇಂದ್ರಗಳನ್ನು ರಚಿಸಲು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ವತಿಯಿಂದ Software ಸಿದ್ಧಪಡಿಸಲಾಗಿದ್ದು, ಬಿ.ಇ.ಒ Login ನಲ್ಲಿ ಕೆಳಕಂಡಂತೆ ಕ್ರಮವಹಿಸಲು ಸೂಚಿಸಿದೆ.

<u>5 ಹಾಗೂ 8ನೇ ತರಗತಿ ಪರೀಕ್ಷಾ ಕೇಂದ್ರಗಳ ರಚನೆಯ ಬಗ್ಗೆ ಮಾರ್ಗದರ್ಶಿ</u>

- Log on to https://kseab.karnataka.gov.in
- Use BEO log-in
- Go to menu $5^{th}$ and $8^{th}$
- Select $5^{th}$ standard
- Create centres using 'Centre formation – $5^{th}$' menu
- Map each $5^{th}$ std school to already selected centres using 'Mapping of schools to centre – $5^{th}$' menu
- View centre wise reports
- View mapping status to ensure the completion of mapping for $5^{th}$ std
- Repeat the same process for $8^{th}$ std.

ಶಾಲೆಗಳನ್ನು ಪರೀಕ್ಷಾ ಕೇಂದ್ರಗಳನ್ನಾಗಿ ಗುರುತಿಸಲು ಹಾಗೂ ಈ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಕೇಂದ್ರಗಳನ್ನು ರದ್ದುಪಡಿಸಲು ಅವಕಾಶ ನೀಡಲಾಗಿದೆ. ಶಾಲೆಗಳ ವಿವರಗಳನ್ನು SATS ತಂತ್ರಾಂಶದಿಂದ ಪಡೆಯಲಾಗಿದ್ದು, ಬಿ.ಇ.ಓ ವ್ಯಾಪ್ತಿಯಲ್ಲಿನ ಎಲ್ಲಾ ರೀತಿಯ ಪಠ್ಯಕ್ರಮಗಳನ್ನು ಬೋಧಿಸುವ ಶಾಲೆಗಳು ಈ ಪಟ್ಟಿಯಲ್ಲಿವೆ. ಈ ಪರೀಕ್ಷೆಗಳು ರಾಜ್ಯ ಪಠ್ಯಕ್ರಮದ ಶಾಲೆಗಳಿಗೆ ಮಾತ್ರ ಅನ್ವಯವಾಗುವುದರಿಂದ ರಾಜ್ಯ ಪಠ್ಯಕ್ರಮ ಹೊಂದಿರದ ಶಾಲೆಗಳನ್ನು 'Mapping of schools to Centre' ಮೆನು ಬಳಸಿ ಕೇಂದ್ರಗಳಿಗೆ Map ಮಾಡುವಾಗ NOT ELIGIBLE ಎಂದು ಗುರುತಿಸಲು ಸೂಚಿಸಿದೆ. ಜಿಲ್ಲಾ ಉಪನಿರ್ದೇಶಕರು (ಆಡಳಿತ), ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಎಲ್ಲಾ ತಾಲ್ಲೂಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳು ಈ ಬಗ್ಗೆ ಸೂಕ್ತ ಕ್ರಮವಹಿಸಿ ದಿನಾಂಕ: 30.01.2023 ರೊಳಗೆ ಕಡ್ಡಾಯವಾಗಿ ಪರೀಕ್ಷಾ ಕೇಂದ್ರಗಳ ರಚನಾ ಕಾರ್ಯವನ್ನು ಪೂರ್ಣಗೊಳಿಸಲು ತಿಳಿಸಿದೆ. ತಂತ್ರಾಂಶಕ್ಕೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆ/ಗೊಂದಲಗಳಿದ್ದಲ್ಲಿ ಮಾಹಿತಿಗಾಗಿ ಮಂಡಲಿಯ **ಸಹಾಯವಾಣಿ ಸಂಖ್ಯೆ 080-29720438 ಮತ್ತು 080-23341615** ಕ್ಕೆ ಕಛೇರಿ ಅವಧಿಯಲ್ಲಿ ಸಂಪರ್ಕಿಸಲು ತಿಳಿಸಿದೆ.

23/1/2023

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ.

**ರವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ತಾಲ್ಲೂಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು ಗೌರವಪೂರ್ವಕವಾಗಿ ಮಾಹಿತಿಗಾಗಿ,**

1. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ರವರಿಗೆ,
2. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ರವರಿಗೆ,
3. ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು ರವರಿಗೆ,
4. ಕಛೇರಿ ಪ್ರತಿ.